303 (814) ಶ್ರೀ ಬಾಲರಾಜ್ ಎಸ್ (ಕೊಳ್ಳೇಗಾಲ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಳ್ಳೇಗಾಲ ತಾಲ್ಲೂಕು ಕುಂತೂರು ಹೋಬಳಿ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯದಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ಈ ಭಾಗಕ್ಕೆ ವಿದ್ಯುತ್ ಉಪ ಕೇಂದ್ರ ಪ್ರಾರಂಭಿಸಲು ಕ್ರಮ ಕೈಗೊಳ್ಳುವುದೇ,

ಇ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಕೊಳ್ಳೇಗಾಲ ತಾಲ್ಲೂಕಿನ ಕುಂತೂರು ಹೋಬಳಿಯ ವ್ಯಾಪ್ತಿಯಲ್ಲಿ ಬರುವ ಕೆಲವು ಗ್ರಾಮಗಳಲ್ಲಿರುವ ಕಡಿಮೆ ವೋಲ್ಟೇಜ್ ಪರಿಸ್ಥಿತಿ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಗಮನಕ್ಕೆ ಬಂದಿರುತ್ತದೆ

ಆ) ಮತ್ತು ಇ) ಕೊಳ್ಳೇಗಾಲ ತಾಲ್ಲೂಕಿನ ಕುಂತೂರು ಗ್ರಾಮದಲ್ಲಿ ಒಂದು 66/11 ಕೆವಿ ವಿದ್ಯುತ್ ಉಪ-ಕೇಂದ್ರದ ಸ್ಥಾಪನೆಗೆ ಸಂಬಂಧಿಸಿದಂತೆ ತಾಂತ್ರಿಕ ಪ್ರಸ್ತಾವನೆಯನ್ನು ಕವಿಪ್ರನಿನಿಯ ತಾಂತ್ರಿಕ ಸಲಹಾ ಸಮಿತಿಯ ಮುಂದೆ ಶೀಘ್ರದಲ್ಲಿಯೇ ಮಂಡಿಸಲಾಗುವುದು ತಾಂತ್ರಿಕ ಸಲಹಾ ಸಮಿತಿಯು ತೆಗೆದುಕೊಳ್ಳುವ ತೀರ್ಮಾನದ ಪ್ರಕಾರ ಮುಂದಿನ ಕ್ರಮಗಳನ್ನು ಜರುಗಿಸಲಾಗುವುದು

ಈ ಮಧ್ಯೆ, ಕೊಳ್ಳೇಗಾಲ ತಾಲ್ಲೂಕಿನ ಕುಂತೂರು ಹೋಬಳಿಯ ವ್ಯಾಪ್ತಿಯಲ್ಲಿನ ಕೆಲವು ಗ್ರಾಮಗಳಲ್ಲಿರುವ ಕಡಿಮೆ ವೋಲ್ಟೇಜ್ ಪರಿಸ್ಥಿತಿಯನ್ನು ಸ್ವಲ್ಪಮಟ್ಟಿಗೆ ನಿವಾರಿಸುವ ಸಲುವಾಗಿ, ಈ ಪ್ರದೇಶಗಳಿಗೆ, ವಿದ್ಯುತ್ ಸರಬರಾಜು ಮಾಡುತ್ತಿರುವ ಫೀಡರ್‌ಗಳನ್ನು ಪುನರ್ವಾಹಕಗೊಳಿಸುವುದು ಹೆಚ್ಚುವರಿ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸುವುದು ಮುಂತಾದ ವ್ಯವಸ್ಥೆ

ಸುಧಾರಣಾ ಕಾರ್ಯಗಳನ್ನು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ಕೈಗೊಂಡಿದೆ

304 (815) ಶ್ರೀ ಬಾಲರಾಜ್ ಎಸ್ (ಕೊಳ್ಳೇಗಾಲ) ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಳ್ಳೇಗಾಲ ಕ್ಷೇತ್ರದ ಶಿವನ ಸಮುದ್ರವನ್ನು ಪ್ರವಾಸಿ ಕೇಂದ್ರವನ್ನಾಗಿ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ,

ಆ) ಇದು ಕಳೆದ ಐದಾರು ವರ್ಷಗಳಿಂದ ಘೋಷಣೆಗಳಿಗೆ ಮಾತ್ರ ಸೀಮಿತವಾಗಿದೆಯೇ ಅಥವಾ ಕಾರ್ಯಗತ ಮಾಡಲು ಸರ್ಕಾರ ಬದ್ಧವಾಗಿದೆಯೇ ,

ಇ) ಈ ಸಾಲಿನಲ್ಲಿ ಏನಾದರೂ ಅಭಿವೃದ್ಧಿ ಕಾರ್ಯಗಳ ಯೋಜನೆ ತಯಾರಾಗುವುದೇ ಹಾಗಿಲ್ಲವಾದಲ್ಲಿ ಕಾರಣಗಳೇನು?

ಶ್ರೀ ಶ್ರೀರಾಮುಲು (ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು)

ಅ) ಹೌದು

ಆ) ಕಾರ್ಯಗತ ಮಾಡಲಾಗುವುದು

ಇ) ಶಿವನಸಮುದ್ರ ಅಭಿವೃದ್ಧಿಯ ಬಗ್ಗೆ ಜಿಲ್ಲಾ ಆಡಳಿತದ ಸಹಯೋಗದೊಂದಿಗೆ ಒಂದು ನೀಲಿ ನಕ್ಷೆಯನ್ನು ತಯಾರಿಸಲಾಗಿದೆ

ಅಭಿವೃದ್ಧಿ ಯೋಜನೆಗಳನ್ನು ಕಾರ್ಯಗತ ಗೊಳಿಸುವ ಹಿನ್ನಲೆಯಲ್ಲಿ ದಿನಾಂಕ 6 12 2006 ರಂದು ಬೆಂಗಳೂರಿನಲ್ಲಿ, ದಿನಾಂಕ 28 12 2006 ರಂದು ಚಾಮರಾಜನಗರದಲ್ಲಿ 2 ಸುತ್ತಿನ ಸಭೆ ನಡೆಸಲಾಗಿದ್ದು, ಮೇಲ್ಕಂಡ ನೀಲಿ ನಕ್ಷೆಯಂತೆ ಅಭಿವೃದ್ಧಿ ಕಾರ್ಯಗಳನ್ನು ಶೀಘ್ರವಾಗಿ ಕಾರ್ಯಗತಗೊಳಿಸಲು ತೀರ್ಮಾನಿಸಲಾಗಿದೆ

ಇದಕ್ಕೆ ಬೇಕಾದ ಸೂಕ್ತ ನಿವೇಶನಗಳನ್ನು ಒದಗಿಸಿಕೊಳ್ಳಲು ಕ್ರಮ ಜರುಗಿಸಲಾಗುತ್ತಿದೆ